ಬಸ್ ನಿಲ್ದಾಣ ಕಾಮಗಾರಿ

2775 (3291), ಶ್ರೀ ಚಿಕ್ಕಮಾಧು ಎಸ್. (ಹೆಚ್.ಡಿ.ಕೋಟೆ)

ಅ) ಹೆಚ್.ಡಿ.ಕೋಟೆ ತಾಲ್ಲೂಕು ಸರಗೂರಿನ ಬಸ್ ನಿಲ್ದಾಣದ ಅಂದಾಜು ವೆಚ್ಚ ಎಷ್ಟು;

ಆ) ಈ ಬಸ್ ನಿಲ್ದಾಣದ ಕಾಮಗಾರಿ ಯಾವಾಗ ಪ್ರಾರಂಭವಾಯಿತು; ಇದರ ಷರತ್ತುಗಳೇನು; ಕಾಮಗಾರಿ ಯಾವಾಗ ಪೂರ್ಣಗೊಳಿಸಲಾಗುವುದು;

ಇ) ಈ ಕಾಮಗಾರಿಯು ಮಂದಗತಿಯಲ್ಲಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಾದರೆ, ವಿಳಂಬದ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ?

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)

ಅ) ಹೆಚ್.ಡಿ.ಕೋಟೆ ತಾಲ್ಲೂಕಿನ ಸರಗೂರಿನಲ್ಲಿ ಪ್ರಯಾಣಿಕರ ಅನುಕೂಲಕ್ಕಾಗಿ ನೂತನ ಬಸ್ ನಿಲ್ದಾಣವನ್ನು ನಿರ್ಮಿಸಿ, ಪ್ರಯಾಣಿಕರಿಗೆ ಉತ್ತಮ ಸಾರಿಗೆ ಮೂಲಭೂತ ಸೌಲಭ್ಯ ಕಲ್ಪಿಸುವ ದೃಷ್ಟಿಯಿಂದ ಸಂಸ್ಥೆಯ ಆರ್ಥಿಕ ಲಭ್ಯತೆಗೆ ಹಾಗೂ ಕರ್ನಾಟಕ ಸರ್ಕಾರದ ಎಸ್.ಡಿ.ಪಿ. ಯೋಜನೆಯಡಿಯಲ್ಲಿ ಹಂತ ಹಂತವಾಗಿ ಕೈಗೊಳ್ಳಲು ಉದ್ದೇಶಿಸಿ, ಅನುಷ್ಠಾನಗೊಳಿಸಲಾಗಿರುತ್ತದೆ. ಮೊದಲ ಹಂತದಲ್ಲಿ ಈಗಾಗಲೇ ₹ 100.00 ಲಕ್ಷಗಳ ಕಾಮಗಾರಿಗಳನ್ನು 2010–11ನೇ ಸಾಲಿನಲ್ಲಿ ಕೈಗೊಂಡು ಪೂರ್ಣಗೊಳಿಸಲಾಗಿರುತ್ತದೆ. 2011–12ನೇ ಸಾಲಿನಲ್ಲಿ 2ನೇ ಹಂತದ ಅಭಿವೃದ್ಧಿ ಕಾಮಗಾರಿಗಳನ್ನು ₹ 76.50 ಲಕ್ಷಗಳ ಅಂದಾಜುವೆಚ್ಚದಲ್ಲಿ ಕೈಗೊಳ್ಳಲಾಗಿದ್ದು, ಕೆಲಸವು ಪೂರ್ಣಗೊಳ್ಳುವ ಹಂತದಲ್ಲಿರುತ್ತದೆ. ಈಗ 2014–15ನೇ ಸಾಲಿನಲ್ಲಿ 3ನೇ ಹತದಲ್ಲಿ ಬಸ್ ನಿಲ್ದಾಣಕ್ಕೆ ಮುಚ್ಚಳ ಹೊದಿಕೆ ಅಳವಡಿಸುವ ಕಾಮಗಾರಿಗೆ ₹ 50.00 ಲಕ್ಷಗಳ ಅಂದಾಜುಪಟ್ಟಿಗೆ ಮಂಜೂರಾತಿ ನೀಡಿ ಕೆಲಸವನ್ನು ಟೆಂಡರ್ ಮೂಲಕ ವಹಿಸಲಾಗಿದೆ.

ಆ) ಸರಗೂರು ಬಸ್ ನಿಲ್ದಾಣ ನಿರ್ಮಾಣದ ಮೊದಲ ಹಂತದ ಕಾಮಗಾರಿಗಳನ್ನು 2010–11ನೇ ಸಾಲಿನಲ್ಲಿ ಕೈಗೊಂಡು ಪೂರ್ಣಗೊಳಿಸಲಾಗಿರುತ್ತದೆ ಹಾಗೂ 2ನೇ ಹಂತದ ಕಾಮಗಾರಿಗಳನ್ನು 2011–12ನೇ ಸಾಲಿನಲ್ಲಿ ಕೈಗೆತ್ತಿಕೊಂಡು ಅಂತಿಮ ಕೆಲಸಗಳು ಪ್ರಗತಿಯಲ್ಲಿರುತ್ತವೆ. 3ನೇ ಹಂತದ ಕಾಮಗಾರಿಗಳಿಗೆ ಈಗಾಗಲೇ ಗುತ್ತಿಗೆದಾರರನ್ನು ಟೆಂಡರ್ ಮೂಲಕ ನಿಗದಿಪಡಿಸಲಾಗಿದ್ದು, ಸದರಿ ಟೆಂಡರ್‌ಗೆ ಮಳೆಗಾಲ ಸೇರಿ 2 ತಿಂಗಳ ಕಾಲಾವಕಾಶವಿದ್ದು, ಟೆಂಡರ್ ನಿಗದಿತ ವೇಳೆಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಿ ಪ್ರಯಾಣಿಕರಿಗೆ ಸೌಲಭ್ಯಗಳನ್ನು ಕಲ್ಪಿಸಲಾಗುವುದು.

ಇ) ಕಾಮಗಾರಿಯು ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಕಟ್ಟಡ ಸಾಮಾಗ್ರಿಗಳಾದ ಮರಳು, ಜಲ್ಲಿ ಕೊರತೆ ಹಾಗೂ ಗುತ್ತಿಗೆದಾರರ ವಿಳಂಬ ನೀತಿಯಿಂದಾಗಿ ಕಾಮಗಾರಿಯು ಕುಂಠಿತಗೊಂಡಿರುತ್ತದೆ. ಬಾಕಿ ಉಳಿದಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಟೆಂಡರ್ ನಿಯಮಾವಳಿಗಳ ಪ್ರಕಾರ ಗುತ್ತಿಗೆದಾರರಿಗೆ ನೋಟಿಸ್ ನೀಡಲಾಗಿರುತ್ತದೆ. ಆದಷ್ಟು ಬೇಗ ಬಾಕಿ ಉಳಿದ ಅಂತಿಮ ಕೆಲಸಗಳನ್ನು ಪೂರ್ಣಗೊಳಿಸಿ, 2ನೇ ಹಂತದ ಕಾಮಗಾರಿಯನ್ನು ಆಗಸ್ಟ್–2014ರ ಅಂತ್ಯದೊಳಗೆ ಪೂರ್ಣಗೊಳಿಸಲಾಗುವುದು. 3ನೇ ಹಂತದಲ್ಲಿ ಬಸ್ ನಿಲ್ದಾಣಕ್ಕೆ ಮುಚ್ಚಳ ಹೊದಿಕೆ ಅಳವಡಿಸುವ ಕಾಮಗಾರಿಯನ್ನು ಅಕ್ಟೋಬರ್–2014 ಅಂತ್ಯದೊಳಗೆ ಪೂರ್ಣಗೊಳಿಸಿ, ಬಸ್ ನಿಲ್ದಾಣವನ್ನು ಪ್ರಯಾಣಿಕರ ಉಪಯೋಗಕ್ಕೆ ಬಿಟ್ಟುಕೊಡಲು ಕ್ರಮ ಜರುಗಿಸಲಾಗುವುದು.